ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲಾಗುವುದು.

(ಊ) ಇಲ್ಲ.

(ಊ) ಅನ್ವಯಿಸುವುದಿಲ್ಲ.

ಬಿಡದಿಯಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ಪ್ರಾರಂಭಿಸುವುದು

749 (875); ಶ್ರೀ ಬಾಲಕೃಷ್ಣ ಹೆಚ್. ಪಿ. (ಮಾಗಡಿ)

(ಅ) ರಾಮನಗರ ತಾಲ್ಲೂಕು, ಬಿಡದಿ ಹೋಬಳಿ, ಬಿಡದಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣವಿಲ್ಲದೆ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಾದರೆ, ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮವೇನು;

(ಇ) ಯಾವ ಕಾಲಮಿತಿಯಲ್ಲಿ ಬಸ್ ನಿಲ್ದಾಣ ನಿರ್ಮಿಸಲಾಗುವುದು?

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು)

(ಅ) ಬಂದಿದೆ.

(ಆ) ಪ್ರಥಮ ಹಂತದಲ್ಲಿ ಬಸ್ ನಿಲ್ದಾಣ ಮಾಡಲು ಭೂಸ್ವಾಧೀನ ಪ್ರಕ್ರಿಯೆಗಳು ಪ್ರಗತಿಯಲ್ಲಿದ್ದು ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ಸಂಸ್ಥೆಯ ಆರ್ಥಿಕ ಹಾಗೂ ಸಂಚಾರದ ಅವಶ್ಯಕತೆಗೆ ಅನುಗುಣವಾಗಿ ಈ ಬಗ್ಗೆ ಸೂಕ್ತ ಕ್ರಮ ಜರುಗಿಸಲಾಗುವುದು.

(ಇ) ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ಕೂಡಲೇ ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಆದರಿಸಿ ಆದಷ್ಟು ಶೀಘ್ರವಾಗಿ ಬಸ್ ನಿಲ್ದಾಣವನ್ನು ನಿರ್ಮಿಸಲಾಗುವುದು.

ಗಂಗಾ ಕಲ್ಯಾಣ ಯೋಜನೆಯ ಕೊಳವೆ ಬಾವಿಗಳು

750 (876); ಶ್ರೀ ಬಾಲಕೃಷ್ಣ ಹೆಚ್. ಸಿ. (ಮಾಗಡಿ)

(ಅ) ಮಾಗಡಿ ಕ್ಷೇತ್ರ ವ್ಯಾಪ್ತಿಗೆ ಅಂಬೇಡ್ಕರ್ ಅಭಿವೃದ್ಧಿ ನಿಗಮ, ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಮಗಳಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳನ್ನು ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

(ಆ) ಬಂದಿದ್ದಲ್ಲಿ, ಎಲ್ಲಾ ಅಭಿವೃದ್ಧಿ ನಿಗಮಗಳಿಂದ ಎಷ್ಟು ಕೊಳವೆ ಬಾವಿ ಗಳನ್ನು ಮಂಜೂರು ಮಾಡಲಾಗಿದೆ (ಪ್ರತ್ಯೇಕ ವಿವರ ನೀಡುವುದು);

(ಇ) ಹಾಗಾದರೆ, ಎಷ್ಟು ಫಲಾನುಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆಯ ಲಾಗಿದೆ, ಇನ್ನು ಕೊರೆಯಬೇಕಾಗಿರುವ ಕೊಳವೆ ಬಾವಿಗಳ ಫಲಾನುಭ ವಿಗಳೆಷ್ಟು; ಎಷ್ಟು ಫಲಾನುಭವಿಗಳ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದೆ (ಪ್ರತ್ಯೇಕ ವಿವರ ನೀಡುವುದು);

(ಈ) ಹಾಗಾದರೆ, ಇನ್ನು ಕೊರೆಯದೆ ಇರುವ ಗುತ್ತಿಗೆದಾರರ ಮೇಲೆ ಸರ್ಕಾರವು ಕೈಗೊಂಡಿರುವ ಕ್ರಮವೇನು; ಯಾವ ಕಾಲಮಿತಿಯಲ್ಲಿ ಫಲಾನು ಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆದು ನೀರಾವರಿ ಸಂಪರ್ಕ ಕಲ್ಪಿಸಲಾಗುವುದು?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

(ಅ) ಬಂದಿದೆ.

(ಆ)